**Akashvani : Bangalore**
**National Bulletin In Kannada**
**11.09.2024 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**11.09.2024 / 7.35 am**

**<><*<><>*><>**

ಮುಖ್ಯಾಂಶಗಳು

**೧. ಗ್ರೇಟರ್ ನೋಯ್ಡಾದಲ್ಲಿಂದು ಸೆಮಿಕಾನ್ ಇಂಡಿಯಾ ೨೦೨೪ ಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ**

**೨. ನಾಗರಿಕ ವಿಮಾನಯಾನ ಕುರಿತ ಎರಡನೇ ಏಷ್ಯಾ ಪೆಸಿಫಿಕ್ ಸಚಿವರ ಸಮ್ಮೇಳನ ಇಂದಿನಿಂದ ಆರಂಭ**

**೩. ಮಹತ್ವಾಕಾಂಕ್ಷೆಯ 'ಸೂರ್ಯ ಘರ್' ಯೋಜನೆಯಡಿ ದೇಶಾದ್ಯಂತ ೧೦ ದಶಲಕ್ಷ ಜನರಿಗೆ ಉಚಿತ ವಿದ್ಯುತ್ ಒದಗಿಸುವ ಗುರಿ- ಸಚಿವ ಪ್ರಲ್ಹಾದ್ ಜೋಶಿ**

**೪. 'ಪಿಎಂ ಆವಾಸ್ ಯೋಜನೆ' ಫಲಾನುಭವಿಗಳಿಗೆ ಇದೇ ೧೫ ರಂದು ಕಂತು ಬಿಡುಗಡೆ ಮಾಡಲಿರುವ ಪ್ರಧಾನಿ**

**೫. ಬುಡಾಪೆಸ್ಟ್ ನಲ್ಲಿ ಇಂದಿನಿಂದ ೪೫ನೇ ಫಿಡೆ ಚೆಸ್ ಒಲಿಂಪಿಯಾಡ್ ಆರಂ**

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು ಗ್ರೇಟರ್ ನೋಯ್ಡಾದಲ್ಲಿಂದು ಸೆಮಿಕಾನ್ ಇಂಡಿಯಾ ೨೦೨೪ ಉದ್ಘಾಟಿಸಲಿದ್ದಾರೆ. ಮೂರು ದಿನಗಳ ಕಾರ್ಯಕ್ರಮದ ಘೋಷವಾಕ್ಯ "ಸೆಮಿಕಂಡಕ್ಟರ್ ಭವಿಷ್ಯವನ್ನು ರೂಪಿಸುವುದು" ಎಂಬುದಾಗಿದೆ. ಸಮ್ಮೇಳನವು ಭಾರತದ ಸೆಮಿಕಂಡಕ್ಟರ್ ಕಾರ್ಯತಂತ್ರ ಮತ್ತು ನೀತಿಯನ್ನು ಬಿಂಬಿಸುತ್ತದೆ ಹಾಗೂ ಇದು ಭಾರತವನ್ನು ಸೆಮಿಕಂಡಕ್ಟರ್‌ಗೆ ಜಾಗತಿಕ ತಾಣವನ್ನಾಗಿ ಮಾಡುತ್ತದೆ. ಸೆಮಿಕಾನ್ ಇಂಡಿಯಾ ಜಾಗತಿಕ ಸೆಮಿಕಂಡಕ್ಟರ್ ವಲಯದ ಅಗ್ರ ನಾಯಕರ ಭಾಗವಹಿಸುವಿಕೆಗೆ ಸಾಕ್ಷಿಯಾಗಲಿದೆ. ಇದು ಜಾಗತಿಕ ನಾಯಕರು, ಕಂಪನಿಗಳು ಮತ್ತು ಸೆಮಿಕಂಡಕ್ಟರ್ ಉದ್ಯಮದ ತಜ್ಞರನ್ನು ಒಗ್ಗೂಡಿಸುತ್ತದೆ. ಸಮ್ಮೇಳನದಲ್ಲಿ ೨೫೦ ಕ್ಕೂ ಅಧಿಕ ಪ್ರದರ್ಶಕರು ಮತ್ತು ೧೫೦ ಭಾಷಣಕಾರರ ಭಾಗವಹಿಸಲಿದ್ದಾರೆ. ಭಾರತವು

ಸೆಮಿಕಂಡಕ್ಟರ್ ಉತ್ಪಾದನಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ಬದ್ಧವಾಗಿದೆ ಮತ್ತು ಎಲೆಕ್ಟ್ರಾನಿಕ್ಸ್ ಮೇಲೆ ಕೇಂದ್ರೀಕರಿಸಿ ತಂತ್ರಜ್ಞಾನ ಕ್ರಾಂತಿಯನ್ನು ಮುನ್ನಡೆಸುತ್ತಿದೆ. ಸಂವಹನ, ರಕ್ಷಣೆ, ಆಟೋಮೊಬೈಲ್‌ಗಳು ಮತ್ತು ಕಂಪ್ಯೂಟಿಂಗ್ ಸಾಧನಗಳು ಸೇರಿದಂತೆ ಬಹುತೇಕ ಎಲ್ಲಾ ಕ್ಷೇತ್ರಗಳಲ್ಲಿ ಸೆಮಿಕಂಡಕ್ಟರ್‌ಗಳನ್ನು ಬಳಕೆ ಮಾಡಲಾಗುತ್ತಿದೆ. ಜಾಗತಿಕ ಸೆಮಿಕಂಡಕ್ಟರ್ ವಲಯದ ಬೆಳವಣಿಗೆಯಲ್ಲಿ ಭಾರತವು ದೊಡ್ಡ ಪಾತ್ರವನ್ನು ವಹಿಸುತ್ತದೆ ಮತ್ತು ಸೆಮಿಕಾನ್ ಇಂಡಿಯಾ ಭಾರತದಲ್ಲಿ ಸೆಮಿಕಂಡಕ್ಟರ್ ಗೆ ಪೂರಕ ವ್ಯವಸ್ಥೆಯನ್ನು ರೂಪಿಸುವ ವಿವಿಧ ಅಂಶಗಳ ಕುರಿತು ಚರ್ಚಿಸಲು ವೇದಿಕೆಯನ್ನು ಒದಗಿಸುತ್ತದೆ. ಈ ಮಧ್ಯೆ, ನಿನ್ನೆ ನವದೆಹಲಿಯ ತಮ್ಮ ನಿವಾಸದಲ್ಲಿ ಸೆಮಿಕಂಡಕ್ಟರ್ ವಲಯದ ಪ್ರತಿನಿಧಿಗಳ ದುಂಡುಮೇಜಿನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ವೈವಿಧ್ಯಮಯ ಸೆಮಿಕಂಡಕ್ಟರ್ ಪೂರೈಕೆ ಸರಣಿಯಲ್ಲಿ ಭಾರತವು ವಿಶ್ವಾಸಾರ್ಹ ಪಾಲುದಾರನಾಗುವ ಸಾಮರ್ಥ್ಯವನ್ನು ಹೊಂದಿದೆ ಎಂದು ಬಲವಾಗಿ ಪ್ರತಿಪಾದಿಸಿದರು. ಸೆಮಿಕಂಡಕ್ಟರ್ ಡಿಜಿಟಲ್ ಯುಗದ ಆಧಾರವಾಗಿದ್ದು, ಮೂಲಭೂತ ಅವಶ್ಯಕತೆಗಳಿಗೂ ಅರೆವಾಹಕ ಉದ್ಯಮವು ತಳಹದಿಯಾಗುವ ದಿನ ದೂರವಿಲ್ಲ. ಪ್ರಜಾಪ್ರಭುತ್ವ ಮತ್ತು ತಂತ್ರಜ್ಞಾನವು ಒಟ್ಟಾಗಿ ಮನುಕುಲದ ಕಲ್ಯಾಣವನ್ನು ಖಾತ್ರಿಪಡಿಸುತ್ತದೆ. ಸೆಮಿಕಂಡಕ್ಟರ್ ವಲಯದಲ್ಲಿ ತನ್ನ ಜಾಗತಿಕ ಜವಾಬ್ದಾರಿಯನ್ನು ಗುರುತಿಸಿ ಭಾರತವು ಈ ಹಾದಿಯಲ್ಲಿ ಮುನ್ನಡೆಯುತ್ತಿದೆ ಎಂದು ಅವರು ಹೇಳಿದರು. ಮೇಕ್ ಇನ್ ಇಂಡಿಯಾ ಮತ್ತು ಮೇಕ್ ಫಾರ್ ದಿ ವರ್ಲ್ಡ್ ಅನ್ನು ಗಮನದಲ್ಲಿಟ್ಟುಕೊಂಡು ಸರ್ಕಾರವು ಪ್ರತಿ ಹಂತದಲ್ಲೂ ಉದ್ಯಮಕ್ಕೆ ಬೆಂಬಲ ನೀಡುವುದನ್ನು ಮುಂದುವರಿಸುತ್ತದೆ ಎಂದು ಪ್ರಧಾನಿ ಹೇಳಿದರು. ಹಲವು ಕಂಪನಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಸೆಮಿಕಂಡಕ್ಟರ್ ವಲಯದ ಬೆಳವಣಿಗೆಗೆ ಭಾರತದ ಬದ್ಧತೆಯನ್ನು ಶ್ಲಾಘಿಸಿದರು ಮತ್ತು ಸೆಮಿಕಾನ್ ಇಂಡಿಯಾ ಆಯೋಜನೆ ಅತ್ಯುತ್ತಮ ಕೆಲಸವಾಗಿದೆ; ಇದರಲ್ಲಿ ಇಡೀ ಸೆಮಿಕಂಡಕ್ಟರ್ ವಲಯದ ನಾಯಕರನ್ನು ಒಂದೇ ಸೂರಿನಡಿ ತರಲಾಗಿದೆ ಎಂದು ಹೇಳಿದರು.

<><*<><>*><>

ನಾಗರಿಕ ವಿಮಾನಯಾನ ಕುರಿತ ಎರಡನೇ ಏಷ್ಯಾ ಪೆಸಿಫಿಕ್ ಸಚಿವರ ಸಮ್ಮೇಳನ ನವದೆಹಲಿಯ ಭಾರತ್ ಮಂಟಪದಲ್ಲಿ ಇಂದಿನಿಂದ ಆರಂಭವಾಗಲಿದೆ. ಎರಡು ದಿನಗಳ ಕಾರ್ಯಕ್ರಮವನ್ನು ಅಂತಾರಾಷ್ಟ್ರೀಯ ನಾಗರಿಕ ವಿಮಾನಯಾನ ಸಂಸ್ಥೆ ಮತ್ತು ನಾಗರಿಕ ವಿಮಾನಯಾನ ಸಚಿವಾಲಯವು ಆಯೋಜಿಸಿದೆ. ಭಾರತವು, ವಿಶ್ವದಲ್ಲೇ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ವೈಮಾನಿಕ ಮಾರುಕಟ್ಟೆಯಾಗಿದೆ ಮತ್ತು ಪ್ರಸ್ತುತ ದೇಶೀಯ ವಿಭಾಗದಲ್ಲಿ ಮೂರನೇ ಅತಿ ದೊಡ್ಡ

ರಾಷ್ಟ್ರದಾಗಿದೆ. ಕಳೆದ ದಶಕದಲ್ಲಿ, ಭಾರತದಲ್ಲಿ ವಿಮಾನಗಳ ಸಂಖ್ಯೆಯು ೪೦೦ ರಿಂದ ೮೦೦ಕ್ಕೂ ಅಧಿಕವಾಗಿದೆ ಮತ್ತು ವಿಮಾನ ನಿಲ್ದಾಣಗಳ ಸಂಖ್ಯೆ ೭೪ ರಿಂದ ೧೫೭ಕ್ಕೆ ಗಣನೀಯವಾಗಿ ಏರಿಕೆಯಾಗಿವೆ. ಉಡಾನ್ ನಂತಹ ಸರ್ಕಾರದ ಉಪಕ್ರಮಗಳು ಪ್ರಾದೇಶಿಕ ಸಂಪರ್ಕವನ್ನು ಹೆಚ್ಚಿಸಿವೆ, ಇದು ದೂರದ ಪ್ರದೇಶಗಳಿಗೂ ಸಂಪರ್ಕವನ್ನು ಖಾತ್ರಿಪಡಿಸುತ್ತದೆ. ಹೊಸ ಪ್ರದೇಶಗಳನ್ನು ವಾಯುಯಾನ ಜಾಲಕ್ಕೆ ಸೇರ್ಪಡೆ ಮಾಡಲಾಗಿದೆ. ಭಾರತವು ನಾಗರಿಕ ವಿಮಾನಯಾನದ ಎರಡನೇ ಏಷ್ಯಾ ಪೆಸಿಫಿಕ್ ಸಚಿವರ ಸಮ್ಮೇಳನವನ್ನು ಆಯೋಜಿಸುವುದರೊಂದಿಗೆ, ದೇಶವು ಜಾಗತಿಕ ವೈಮಾನಿಕ ನಾವೀನ್ಯತೆ ಮತ್ತು ಬೆಳವಣಿಗೆಯಲ್ಲಿ ಮುಂಚೂಣಿಯಲ್ಲಿದೆ ಎಂಬುದನ್ನು ಖಾತ್ರಿಪಡಿಸುತ್ತಿದೆ.

<><*<><>*><>

ಪಿಎಂ ಸೂರ್ಯ ಘರ್ ಜಾಗತಿಕವಾಗಿ ಬಹು ದೊಡ್ಡ ಯೋಜನೆಯಾಗಿದೆ ಎಂದು ಕೇಂದ್ರ ಹೊಸ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಗುಜರಾತ್ ನ ಗಾಂಧಿನಗರಕ್ಕೆ ನಿನ್ನೆ ಭೇಟಿ ನೀಡಿ ಇದೇ ೧೬ರಿಂದ ಆಯೋಜಿಸಿರುವ ಜಾಗತಿಕ ಮರು ಹೂಡಿಕೆ ಸಮಾವೇಶದ ಸಿದ್ಧತೆ ಪರಿಶೀಲಿಸಿ ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆಯ ಸೂರ್ಯ ಘರ್ ಯೋಜನೆಯಡಿ ದೇಶಾದ್ಯಂತ ೧೦ ಮಿಲಿಯನ್ ಜನರಿಗೆ ಉಚಿತ ವಿದ್ಯುತ್ ಒದಗಿಸುವ ಗುರಿ ಹೊಂದಲಾಗಿದೆ ಎಂದರು. ಗುಜರಾತ್ ಅಲ್ಲಿ ೧.೬೮ ಲಕ್ಷಕ್ಕೂ ಹೆಚ್ಚು ಮನೆಗಳು ಮೇಲ್ಛಾವಣಿ ಸೌರ ಘಟಕ ಅಳವಡಿಸಿಕೊಂಡು ಪಿಎಂ ಸೂರ್ಯ ಘರ್ ಯೋಜನೆ ಅನುಷ್ಠಾನದಲ್ಲಿ ಅತ್ಯುತ್ತಮ ಸಾಧನೆ ತೋರಿದೆ. ಪಿಎಂ ಕುಸುಮ್ ಯೋಜನೆ ಕೂಡ ಗಮನಾರ್ಹ ಪ್ರಗತಿ ಕಂಡಿದೆ, ಗುಜರಾತ್ ರಾಜ್ಯದಲ್ಲಿ ಈಗಾಗಲೇ ಸೌರ ನೀರಿನ ಪಂಪ್‌ಗಳನ್ನು ಕೂಡ ಸ್ಥಾಪಿಸಲಾಗಿದೆ ಎಂದು ಸಚಿವರು ತಿಳಿಸಿದರು. ಸೂರ್ಯ ಘರ್ ಮತ್ತು ಪಿಎಂ ಕುಸುಮ ಯೋಜನೆ ಕುರಿತಂತೆ ಗುಜರಾತ್‌ನ ಹಣಕಾಸು, ಇಂಧನ ಮತ್ತು ಪೆಟ್ರೋಕೆಮಿಕಲ್ಸ್ ಸಚಿವ ಕನು ದೇಸಾಯಿ ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕಾರ್ಯಕ್ಷಮತೆ ಪರಿಶೀಲಿಸಿದರು.

<><*<><>*><>

ಜಾರ್ಖಂಡ್‌ನ ಜಮ್‌ಶೆಡ್‌ಪುರದಲ್ಲಿ ಇದೇ ತಿಂಗಳ ೧೫ ರಂದು ಪ್ರಧಾನಮಂತ್ರಿ ಆವಾಸ್ ಯೋಜನೆಯ ಫಲಾನುಭವಿಗಳಿಗೆ ೨ ಸಾವಿರದ ೭೪೫ ಕೋಟಿ ರೂಪಾಯಿಗಳ ಕಂತುಗಳನ್ನು ಪ್ರಧಾನಿ ನರೇಂದ್ರ ಮೋದಿ ಬಿಡುಗಡೆಗೊಳಿಸಲಿದ್ದಾರೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ನಿನ್ನೆ ವಿಡಿಯೋ ಕಾನ್ಫರೆನ್ಸ್ ಮೂಲಕ ವಿವಿಧ ರಾಜ್ಯಗಳ

ಗ್ರಾಮೀಣಾಭಿವೃದ್ಧಿ ಸಚಿವರ ಸಭೆ ನಡೆಸಿದ ಕೇಂದ್ರ ಸಚಿವರು, ಕಾರ್ಯಕ್ರಮದ ಸಿದ್ಧತೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಚಿವರಿಗೆ ಸೂಚನೆ ನೀಡಿದರು. ಬಳಿಕ ಮಾತನಾಡಿದ ಅವರು, ಈ ಕಾರ್ಯಕ್ರಮದಲ್ಲಿ ಯೋಜನೆಯ ಎಲ್ಲಾ ಫಲಾನುಭವಿಗಳಿಗೆ ಸ್ವೀಕಾರ ಪತ್ರ ವಿತರಿಸಲಾಗುವುದು. ದೇಶದ ಬಡ ಸಹೋದರ ಸಹೋದರಿಯರ ಶ್ರೇಯೋಭಿವೃದ್ಧಿ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಗುರಿಯಾಗಿದೆ. ಆ ದಿಸೆಯಲ್ಲಿ 'ಪ್ರಧಾನ ಮಂತ್ರಿ ಆವಾಸ್' ಯೋಜನೆ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ತಿಳಿಸಿದರು. ಯೋಜನೆಯ ಯಶಸ್ಸು ಮತ್ತು ಗ್ರಾಮೀಣ ಮನೆಗಳ ಅಗತ್ಯವನ್ನು ಮನಗಂಡು ಈ ಯೋಜನೆಯನ್ನು ವಿಸ್ತರಿಸಲಾಗಿದ್ದು, ಮುಂದಿನ ೫ ವರ್ಷಗಳಲ್ಲಿ ಬಡವರಿಗೆ ಎರಡು ಕೋಟಿ ಹೆಚ್ಚುವರಿ ಮನೆಗಳನ್ನು ಕೇಂದ್ರ ಸರ್ಕಾರ ನಿರ್ಮಿಸಿಕೊಡಲಿದೆ ಎಂದು ಕೇಂದ್ರ ಸಚಿವರು ಮಾಹಿತಿ ನೀಡಿದರು.

**<><*<><>*><>**

೨೦೨೪ರ ಏಪ್ರಿಲ್‌ನಿಂದ ಆಗಸ್ಟ್‌ವರೆಗೆ ಭಾರತದ ಕಲ್ಲಿದ್ದಲು ಉತ್ಪಾದನೆಯು ೩೮೪ ದಶಲಕ್ಷ ಟನ್‌ಗಳಿಗಿಂತಲೂ ಅಧಿಕವಾಗಿದೆ, ಕಳೆದ ವರ್ಷಕ್ಕೆ ಹೋಲಿಸಿದರೆ ಶೇಕಡ ೬ರಷ್ಟು ಹೆಚ್ಚಳವಾಗಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ ೩೬೧.೧೧ ದಶಲಕ್ಷ ಟನ್ ಉತ್ಪಾದನೆಯಾಗಿತ್ತು. ಕಲ್ಲಿದ್ದಲು ಸಚಿವಾಲಯವು ಬಿಡುಗಡೆ ಮಾಡಿದ ಅಧಿಕೃತ ಮಾಹಿತಿಯ ಪ್ರಕಾರ, ಗಣಿಗಾರಿಕೆ ಕಾರ್ಯಾಚರಣೆಗಳ ಮೇಲೆ ಪರಿಣಾಮ ಬೀರುವ ಭಾರೀ ಮಳೆಯಿಂದಾಗಿ, ಆಗಸ್ಟ್ ತಿಂಗಳಲ್ಲಿ ಕೆಲವು ವ್ಯತ್ಯಯಗಳ ಹೊರತಾಗಿಯೂ, ಏಪ್ರಿಲ್‌ನಿಂದ ಆಗಸ್ಟ್ ೨೦೨೪ ರ ಅವಧಿಯಲ್ಲಿ ಭಾರತದ ಕಲ್ಲಿದ್ದಲು ಉತ್ಪಾದನೆ ಮತ್ತು ಪೂರೈಕೆ ಪ್ರವೃತ್ತಿಗಳು ಸಕಾರಾತ್ಮಕವಾಗಿವೆ. ಕಳೆದ ನಾಲ್ಕು ವರ್ಷಗಳಲ್ಲಿ ಕಲ್ಲಿದ್ದಲು ಉತ್ಪಾದನೆ ಸ್ಥಿರವಾಗಿ ಏರಿಕೆಯಾಗಿದೆ ಎಂದು ಸಚಿವಾಲಯ ಹೇಳಿದೆ. ಭಾರತದ ಕಲ್ಲಿದ್ದಲು ಉತ್ಪಾದನೆಯು ೨೦೧೯-೨೦ ರಲ್ಲಿ ೭೩೦.೯ ಮಿಲಿಯನ್ ಟನ್‌ಗಳಿಂದ ೨೦೨೩-೨೪ ರ ಆರ್ಥಿಕ ವರ್ಷದಲ್ಲಿ ೯೯೭.೮೩ ಮಿಲಿಯನ್ ಟನ್‌ಗಳಿಗೆ ದಾಖಲೆಯ ಮಟ್ಟಕ್ಕೆ ಶೇಕಡ ೧೧.೭ರಷ್ಟು ಹೆಚ್ಚಾಗಿದೆ.

**<><*<><>*><>**

ಇದೇ ತಿಂಗಳ ೨ರಿಂದ ತನ್ನ ರಾಷ್ಟ್ರೀಯ ಸದಸ್ಯತ್ವ ಅಭಿಯಾನವನ್ನು ಆರಂಭಿಸಿದ ಭಾರತೀಯ ಜನತಾಪಕ್ಷ ಕೇವಲ ಎಂಟು ದಿನಗಳಲ್ಲಿ ಪಕ್ಷವು ಎರಡು ಕೋಟಿಗೂ ಅಧಿಕ ಹೊಸ ಸದಸ್ಯರನ್ನು ಸೇರ್ಪಡೆ ಮಾಡಿಕೊಂಡಿದೆ. ಪಕ್ಷ ಈ ವಿಷಯವನ್ನು ಪ್ರಕಟಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಮೊದಲ ಸದಸ್ಯರಾಗುವ ಮೂಲಕ ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಿದರು. ಬಿಜೆಪಿ

ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಅವರು ಒಂಬತ್ತು ರಾಜ್ಯಗಳ ಪದಾಧಿಕಾರಿಗಳೊಂದಿಗೆ ಪ್ರತ್ಯೇಕವಾಗಿ ನಡೆಯುತ್ತಿರುವ ಸದಸ್ಯತ್ವ ಅಭಿಯಾನವನ್ನು ಪರಿಶೀಲಿಸಿದ್ದಾರೆ ಎಂದು ಬಿಜೆಪಿ ಪ್ರಧಾನ ಕಾರ್ಯದರ್ಶಿ ವಿನೋದ್ ತಾವ್ಡೆ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಅದರಲ್ಲಿ ಉತ್ತರ ಪ್ರದೇಶ, ಬಿಹಾರ, ಛತ್ತೀಸ್‌ಗಢ, ಮಧ್ಯಪ್ರದೇಶ, ಒಡಿಶಾ, ಕರ್ನಾಟಕ, ತಮಿಳುನಾಡು, ಗುಜರಾತ್ ಮತ್ತು ರಾಜಸ್ಥಾನ ರಾಜ್ಯಗಳು ಸೇರಿವೆ. ಮುಂದಿನ ದಿನಗಳಲ್ಲಿ ಇತರೆ ರಾಜ್ಯಗಳೊಂದಿಗೆ ಚರ್ಚೆ ನಡೆಸಲಾಗುವುದು. ಮಹಿಳೆಯರು, ಗಡಿ ಗ್ರಾಮಗಳು ಮತ್ತು ದೂರದ, ಗುಡ್ಡಗಾಡು ಪ್ರದೇಶಗಳಿಗೆ ಸದಸ್ಯತ್ವ ಅಭಿಯಾನವನ್ನು ಯಶಸ್ವಿಯಾಗಿ ವಿಸ್ತರಿಸುವ ಕಾರ್ಯತಂತ್ರಗಳ ಬಗ್ಗೆ ಸಭೆಯು ಹೆಚ್ಚು ಗಮನಹರಿಸಿದೆ ಎಂದು ಅವರು ಹೇಳಿದರು.

<><*<><>*><>

೪೫ನೇ ಫೀಡೆ ಚೆಸ್ ಒಲಿಂಪಿಯಾಡ್ ಇಂದಿನಿಂದ ಹಂಗೇರಿ ರಾಜಧಾನಿ ಬುಡಾಪೇಸ್ಟ್ ನಲ್ಲಿ ಆರಂಭವಾಗಲಿದೆ. ೧೯೩ ರಾಷ್ಟ್ರದ ತಂಡದ ಒಂದು ಸಾವಿರದ ೮೦೦ ಆಟಗಾರರು ೧೨ ದಿನಗಳ ದ್ವೈವಾರ್ಷಿಕ ಟೂರ್ನಿಯ ಮುಕ್ತ ವಿಭಾಗದಲ್ಲಿ ಸ್ಪರ್ಧಿಸಲಿದ್ದಾರೆ. ಅಲ್ಲದೆ, ೧೮೧ ತಂಡಗಳು ಮಹಿಳೆಯರ ವಿಭಾಗದಲ್ಲಿ ಸ್ಪರ್ಧೆಗಿಳಿಯಲಿವೆ. ಭಾರತ ತಂಡ ಅಮೆರಿಕದ ನಂತರ ೨ನೇ ಶ್ರೇಯಾಂಕಿತ ತಂಡವಾಗಿ ಮುಕ್ತ ವಿಭಾಗದಲ್ಲಿ ಸೆಣಸಲಿದೆ. ವಿಶ್ವ ಚಾಂಪಿಯನ್ ಶಿಪ್ ಸವಾಲುದಾರ ಡಿ.ಗುಕೇಶ್ ವಿಶ್ವದ ನಂಬರ್ ೪ನೇ ಕ್ರಮಾಂಕದ ಅರ್ಜುನ್ ಎರಿಗೈಸಿ , ಆರ್. ಪ್ರಜ್ಞಾನಂದ, ವಿದಿತ್ ಗುಜರಾತಿ ಮತ್ತು ಪಿ. ಹರಿಕೃಷ್ಣ ಭಾರತದ ಸವಾಲು ಮುನ್ನಡೆಸಲಿದ್ದಾರೆ. ಮಹಿಳೆಯರ ವಿಭಾಗದಲ್ಲಿ ಹರಿಕಾ ದ್ರೋಣವಳ್ಳಿ, ಆರ್. ವೈಶಾಲಿ, ದಿವ್ಯಾ ದೇಶ್ ಮುಖ್, ವಂತಿಕಾ ಅಗರ್‌ವಾಲ್ ಮತ್ತು ದಾನಿಯಾ ಸಚ್ ದೇವ್ ಭಾರತದ ಪ್ರಮುಖ ಆಟಗಾರ್ತಿಯರಾಗಿದ್ದಾರೆ. ಕಳೆದ ೪೪ನೇ ಆವೃತ್ತಿಯ ಫೀಡೆ ಚೆಸ್ ಟೂರ್ನಿ ಆಯೋಜಿಸಿದ್ದ ಭಾರತ, ಮುಕ್ತ ಹಾಗೂ ಮಹಿಳೆಯರ ವಿಭಾಗಗಳೆರಡರಲ್ಲೂ ಕಂಚಿನ ಪದಕಗಳನ್ನು ಗೆದ್ದುಕೊಂಡಿತ್ತು.

<><*<><>*><>

ಚೀನಾದ ಹುಲುನ್‌ಬುಯಿರ್‌ನಲ್ಲಿ ನಡೆಯುತ್ತಿರುವ ಪುರುಷರ ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಹಾಕಿ ಟೂರ್ನಿಯ ತನ್ನ ಮೂರನೇ ಪಂದ್ಯದಲ್ಲಿಂದು ಭಾರತ ತಂಡ, ಮಲೇಷಿಯಾ ವಿರುದ್ಧ ಸೆಣಸಲಿದೆ. ಭಾರತೀಯ ಕಾಲಮಾನ ಮಧ್ಯಾಹ್ನ ೧.೧೫ಕ್ಕೆ ಪಂದ್ಯ ಆರಂಭವಾಗಲಿದೆ. ಮೊದಲೆರಡೂ ಪಂದ್ಯಗಳಲ್ಲಿ ಚೀನಾವನ್ನು ೩-೦ ಗೋಲುಗಳಿಂದ ಹಾಗೂ ಜಪಾನ್ ತಂಡವನ್ನು ೫-೧

ಗೋಲುಗಳಿಂದ ಸುಲಭವಾಗಿ ಮಣಿಸಿ ಟೂರ್ನಿಯಲ್ಲಿ ಭರ್ಜರಿ ಆರಂಭ ಪಡೆದಿರುವ ಹರ್ಮನ್‌ಪ್ರೀತ್ ಸಿಂಗ್ ಸಾರಥ್ಯದ ಭಾರತದ ಪುರುಷರ ಹಾಕಿ ತಂಡ ಹ್ಯಾಟ್ರಿಕ್ ಗೆಲುವಿನ ನಿರೀಕ್ಷೆಯಲ್ಲಿದೆ. ಈ ಮೂಲಕ ಹಾಲಿ ಚಾಂಪಿಯನ್ ಪಟ್ಟ ಉಳಿಸಿಕೊಳ್ಳುವತ್ತ ಮತ್ತೊಂದು ಯಶಸ್ವಿ ಹೆಜ್ಜೆಯನ್ನು ಮುಂದಿರಿಸಲು ಎದುರು ನೋಡುತ್ತಿದೆ. ಏಷ್ಯನ್ ಚಾಂಪಿಯನ್ಸ್ ಟ್ರೋಫಿ ಗೆಲ್ಲುವ ಫೇವರೆಟ್ ಎನಿಸಿರುವ ಭಾರತ ತಂಡ ಈ ಹಿಂದೆ ನಾಲ್ಕು ಬಾರಿ ಪ್ರಶಸ್ತಿ ಗೆದ್ದಿದೆ. ಭಾರತೀಯ ಹಾಕಿಯ ದಿಗ್ಗಜ, ಮುಖ್ಯ ಗೋಲ್‌ಕೀಪರ್ ಪಿ.ಆರ್. ಶ್ರೀಜೇಶ್ ನಿವೃತ್ತಿ ಘೋಷಿಸಿದ ಬಳಿಕ, ಅವರ ಸ್ಥಾನ ತುಂಬಿರುವ ಕ್ರಿಷನ್ ಬಹಾದ್ದೂರ್ ಪಾಠಕ್ ಇದುವರೆಗೂ ಟೂರ್ನಿಯಲ್ಲಿಕೇವಲ ೧ ಗೋಲು ಬಿಟ್ಟುಕೊಡುವ ಮೂಲಕ ಉತ್ತಮ ಪ್ರದರ್ಶನ ತೋರಿದ್ದಾರೆ. ರೌಂಡ್ ರಾಬಿನ್ ಮಾದರಿಯ ಈ ಟೂರ್ನಿಯಲ್ಲಿ ಅಗ್ರ ಸ್ಥಾನ ಪಡೆಯುವ ನಾಲ್ಕು ತಂಡಗಳು ಇದೇ ೧೬ರಂದು ನಡೆಯಲಿರುವ ಸೆಮಿಫೈನಲ್ಸ್ ಗೆ ಅರ್ಹತೆ ಪಡೆಯಲಿದೆ.ಇದೇ ೧೭ರಂದು ಫೈನಲ್ ಪಂದ್ಯ ನಡೆಯಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>**